# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ 1975 ರ ಪ್ರಕರಣ 11 (1) ರನ್ವಯ ಭಿಕ್ಷುಕರನ್ನು ದಸ್ತಗಿರಿ/ರಕ್ಷಣೆ ಮಾಡಲು ಮತ್ತು ಸಾರ್ವಜನಿಕರಿಗೆ ಮಾಹಿತಿ ನೀಡಲು ಹಾಗೂ ಪ್ರಕರಣ (31) ರಡಿಯಲ್ಲಿ ಭಿಕ್ಷುಕರ ಉಪಕರವನ್ನು ವಸೂಲು ಮಾಡಲು ನೋಡಲ್ ಅಧಿಕಾರಿಗಳಾಗಿ ನೇಮಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ:ಎಸ್‌ಡಬ್ಲ್ಯೂಡಿ, 02 ಎಸ್‌ಬಿಆರ್ 2009, ದಿನಾಂಕ: 22.05.2009

2) ದಿನಾಂಕ:04.11.2015 ರಂದು ನಡೆದ ಕರ್ನಾಟಕ ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿ ಸಭೆಯ ಚರ್ಚೆ

*****

**ಪ್ರಸ್ತಾವನೆ:-**

ರಾಜ್ಯದಲ್ಲಿ ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ 1975 ಜಾರಿಯಲ್ಲಿದ್ದು, ಸದರಿ ಅಧಿನಿಯಮದ ಪ್ರಕರಣ 11 (1) ರನ್ವಯ ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಆದೇಶದಲ್ಲಿ ಆಯಾ ಜಿಲ್ಲೆಯ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಆಯಾ ಜಿಲ್ಲೆಯ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ಹಾಗೂ ಆಯಾಯ ತಾಲ್ಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಾಲ್ಲೂಕು ಸಮಾಜ ಕಲ್ಯಾಧಿಕಾರಿಗಳನ್ನು ಭಿಕ್ಷುಕರನ್ನು ದಸ್ತಗಿರಿ/ರಕ್ಷಣೆ ಮಾಡಲು ಅಧಿಕಾರ ಪ್ರತ್ಯಾಯೋಜಿಸಿ ಆದೇಶ ಹೊರಡಿಸಲಾಗಿದೆ.

ಆದರೆ, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರಿಗೆ ಭಿಕ್ಷುಕರ ಸಮಸ್ಯೆಯ ಬಗ್ಗೆ ದೂರು ನೀಡಲು ಸಂಪರ್ಕಿಸಬೇಕಾದ ಅಧಿಕಾರಿಗಳ ಬಗ್ಗೆ ಸ್ಥಳೀಯವಾಗಿ ಮಾಹಿತಿಯ ಕೊರತೆಯಿರುವುದಾಗಿ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ: 04-11-2015ರಂದು ನಡೆದ ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಭರವಸೆಗಳ ಸಮಿತಿಯಲ್ಲಿ ಚರ್ಚೆಗೆ ಬಂದಿದ್ದು, ಸಮಿತಿಯು ಆಯಾ ತಾಲ್ಲೂಕಿನ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳನ್ನು ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಲು ಶಿಫಾರಸ್ಸು ಮಾಡಿರುವಂತೆ, ರಾಜ್ಯದಲ್ಲಿ ಕರ್ನಾಟಕ ಭಿಕ್ಷಾಟನಾ ನಿಷೇಧ ಕಾಯಿದೆ 1975 ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಭಿಕ್ಷುಕರ ಸಮಸ್ಯೆ,ದಸ್ತಗಿರಿ, ರಕ್ಷಣೆ ಇತ್ಯಾದಿಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು, ಭಿಕ್ಷುಕರ ಕುರಿತ ದೂರಗಳ ಬಗ್ಗೆ ಸಾರ್ವಜನಿಕರು ಸಂಪರ್ಕಿಸಲು **ಆಯಾ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್** ಮತ್ತು **ಸಹಾಯಕ ನಿರ್ದೇಶಕರು,ಗ್ರೇಡ್-I/ಗ್ರೇಡ್-II, ಸಮಾಜ ಕಲ್ಯಾಣ ಇಲಾಖೆ** ಇವರನ್ನು ಈಗಾಗಲೇ ಭಿಕ್ಷುಕರನ್ನು/ನಿರಾಶ್ರಿತರನ್ನು ರಕ್ಷಣೆ ಮಾಡಲು ಅಧಿಕಾರವನ್ನು ಪ್ರತ್ಯಾಯೋಜಿಸಿರುವುದರಿಂದ

----2

ಸದರಿ ಅಧಿಕಾರಿಗಳನ್ನು ತಾಲ್ಲೂಕು ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಲು ತೀರ್ಮಾನಿಸಲಾಗಿದೆ. ಆದುದರಿಂದ, ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಸಕಇ 30 ಎಸ್‌ಬಿಆರ್ 2011, ಬೆಂಗಳೂರು ದಿನಾಂಕ: 05-12-2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ 1975 ರ ಪ್ರಕರಣ 11(1) ರನ್ವಯ ಭಿಕ್ಷುಕರ ಸಮಸ್ಯೆ, ದಸ್ತಗಿರಿ, ರಕ್ಷಣೆ ಇತ್ಯಾದಿಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು, ಭಿಕ್ಷುಕರ ಕುರಿತ ದೂರಗಳ ಬಗ್ಗೆ ಸಾರ್ವಜನಿಕರು ಸಂಪರ್ಕಿಸಲು ಹಾಗೂ ಪ್ರಕರಣ 31 ರಡಿಯಲ್ಲಿ ಭಿಕ್ಷುಕರ ಉಪಕರ ವಸೂಲಾತಿಗಾಗಿ ಆಯಾ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಮತ್ತು ಸಹಾಯಕ ನಿರ್ದೇಶಕರು, ಗ್ರೇಡ್-I/ಗ್ರೇಡ್-II, ಸಮಾಜ ಕಲ್ಯಾಣ ಇಲಾಖೆ ಇವರನ್ನು ತಾಲ್ಲೂಕು ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಗಿರಿಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ

ಪ್ರತಿಗಳು:-

1. ಕಾರ್ಯದರ್ಶಿ, ಕೇಂದ್ರ ಪರಿಹಾರ ಸಮಿತಿ, ಬೆಂಗಳೂರು
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3. ಆಯುಕ್ತರು, ಹಿಂದುಳಿದವರ್ಗಗಳ ಕಲ್ಯಾಣ ಇಲಾಖೆ , ಬೆಂಗಳೂರು
4. ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಜಿಲ್ಲೆ
5. ಸಂಬಂಧಪಟ್ಟ ಜಿಲ್ಲೆಯ ನೋಡಲ್ ಅಧಿಕಾರಿಗಳಿಗೆ
6. ಜಂಟಿ/ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಸಂಬಂಧಪಟ್ಟ ಜಿಲ್ಲೆ.
7. ಸಂಬಂಧಪಟ್ಟ ತಾಲ್ಲೂಕು ಪಂಚಾಯಿತ್, ಕಾರ್ಯನಿರ್ವಾಹಕ ಅದಿಕಾರಿಗಳು
8. ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳು ಸಂಭಂದಪಟ್ಟ ತಾಲ್ಲೂಕು.
9. ಅಧೀಕ್ಷಕರು, ನಿರಾಶ್ರಿತರ ಪರಿಹಾರ ಕೇಂದ್ರಗಳು ಸಂಬಂಧಪಟ್ಟ ಜಿಲ್ಲೆ
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು